**Akashvani : Bangalore**
**Regional Bulletin In Kannada**
**14.06.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.06.2026 / 18.40 hrs**

---

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಮೂರು ಕ್ಷೇತ್ರಗಳಲ್ಲಿ ಕ್ರಾಂತಿಕಾರಿ ಬದಲಾವಣೆ - ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೨. ಮುಂಗಾರು ಹಂಗಾಮಿಗೆ ರಾಜ್ಯದ ರೈತರಿಗೆ ಸಾಕಷ್ಟು ಪ್ರಮಾಣದ ರಸಗೊಬ್ಬರ ಲಭ್ಯತೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಗೃಹಲಕ್ಷ್ಮಿ, ಗೃಹಜ್ಯೋತಿ ಯೋಜನೆ ಮುಂದುವರಿಕೆ ; ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಬಿಡದಿ ಟೌನ್‌ಶಿಪ್ ವಿವಾದ ; ರೈತರ ಪರ ಜೆಡಿಎಸ್ ಕಾನೂನು ಹೋರಾಟ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

---

ಪ್ರಧಾನಿ ನರೇಂದ್ರ ಮೋದಿ ಸರ್ಕಾರವು ೧೨ ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಬೆಂಗಳೂರಿನಲ್ಲಿಂದು ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು.

ಬನ್ನಪ್ಪ ಗಾರ್ಡನ್‌ನಲ್ಲಿ ತಾಯಿಯ ಹೆಸರಿನಲ್ಲಿ ಒಂದು ಗಿಡ ಅಭಿಯಾನದ ಅಂಗವಾಗಿ ಗಿಡ ನೆಟ್ಟರು. ಮೈಸೂರು ಬ್ಯಾಂಕ್ ವೃತ್ತದ ಬಳಿ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿ, ಶ್ರಮದಾನದಲ್ಲಿ ಪಾಲ್ಗೊಂಡರು.

ನಂತರ ದೇವನಹಳ್ಳಿಯಲ್ಲಿ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇಗೆ ಭೇಟಿ ನೀಡಿ, ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಸಚಿವೆ ನಿರ್ಮಲಾ ಸೀತಾರಾಮನ್ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ೧೨ ವರ್ಷ ಪೂರೈಸಿದ್ದು, ಈ ಅವಧಿಯಲ್ಲಿ ಪ್ರಮುಖ ಮೂರು ಕ್ಷೇತ್ರಗಳಲ್ಲಿ ಕ್ರಾಂತಿಕಾರಕ ಬದಲಾವಣೆಯಾಗಿದೆ ಎಂದರು.

ಡಿಜಿಟಲ್ ಪಾವತಿಯಲ್ಲಿ ಗಮನಾರ್ಹ ರೀತಿಯಲ್ಲಿ ಬದಲಾವಣೆಯಾಗಿದೆ. ಸಣ್ಣ ರೈತರು ಕೂಡ ಯುಪಿಐ ಮೂಲಕ ಪಾವತಿಸುತ್ತಿದ್ದಾರೆ. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿಯೂ ಡಿಜಿಟಲ್ ಪಾವತಿ ಹೆಚ್ಚಾಗಿತ್ತು ಎಂದು ತಿಳಿಸಿದರು.

ಇನ್ನು ಮೂಲಸೌಕರ್ಯ ಅಭಿವೃದ್ಧಿಯಲ್ಲಿ ತ್ವರಿತ ಗತಿಯಲ್ಲಿ ಅಭಿವೃದ್ಧಿಯಾಗಿದೆ. ಅತ್ಯುತ್ತಮ ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಲಾಗಿದೆ.

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇಯಂತಹ ಯೋಜನೆಗಳು, ಆರ್ಥಿಕ ಬೆಳವಣಿಗೆಯನ್ನು ವೇಗಗೊಳಿಸುವ ಮತ್ತು ನಾಗರಿಕರ ಜೀವನವನ್ನು ಸುಗಮಗೊಳಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಎನ್‌ಡಿಎ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು.

ಅಂತಿಮವಾಗಿ ೨೦೪೭ರ ಒಳಗೆ ವಿಕಸಿತ ಭಾರತ ಸಂಕಲ್ಪದ ಸಾಕಾರಕ್ಕೆ ಪ್ರಯತ್ನಿಸಲಾಗುತ್ತಿದೆ. ಇದರಲ್ಲಿ ದೇಶದ ಜನತೆಯ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದ್ದಾರೆ.

---

ಜಾಗತಿಕ ಬಿಕ್ಕಟ್ಟಿನ ನಡುವೆಯೂ ಕೇಂದ್ರ ಸರ್ಕಾರ ರಾಜ್ಯದ ರೈತರಿಗಾಗಿ ೨೦೨೫ರ ಮುಂಗಾರು ಹಂಗಾಮಿಗೆ ಸಾಕಷ್ಟು ಪ್ರಮಾಣದ ರಸಗೊಬ್ಬರ ಲಭ್ಯತೆಯನ್ನು ಖಚಿತಪಡಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಇರಾನ್-ಇಸ್ರೇಲ್ ಸಂಘರ್ಷ ಮತ್ತು ರಫ್ತು ಸವಾಲುಗಳ ಮಧ್ಯೆಯೂ ಕೇಂದ್ರ ಸರ್ಕಾರ ಮುಂಜಾಗ್ರತೆ ವಹಿಸಿದ್ದು, ದೇಶೀಯವಾಗಿ ಯೂರಿಯಾ ಉತ್ಪಾದನೆ ಹೆಚ್ಚಿಸಿದೆ. ಅಲ್ಲದೇ ಆಮದನ್ನು ಸಹ ಸರಿಯಾಗಿ ನಿಭಾಯಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿ ಸಮರ್ಪಕ ರಸಗೊಬ್ಬರ ಲಭ್ಯತೆಯಿದೆ. ಮುಂಗಾರು ಹಂಗಾಮಿಗೂ ಮುನ್ನವೇ ರಾಜ್ಯಕ್ಕೆ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರವನ್ನು ಪೂರೈಸಲಾಗಿದೆ ಎಂದು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈತರ ಹಿತ ಕಾಯಲು ಬದ್ಧವಾಗಿದೆ. ಹಾಗೆಯೇ ರಾಜ್ಯಾದ್ಯಂತ ಸಾಕಷ್ಟು ಅಗತ್ಯ ಪ್ರಮಾಣದ ರಸಗೊಬ್ಬರ ಲಭ್ಯತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

---

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಹಾಗೂ ಗೃಹ ಜ್ಯೋತಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಈ ಬಗೆಗಿನ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಕೆಲವರು ಮೃತಪಟ್ಟವರ ಹೆಸರಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ, ಖಾತೆ ತೆರೆದು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಹೀಗಾಗಿ ಗ್ಯಾರಂಟಿ ಯೋಜನೆ ಫಲಾನುಭವಿಗಳ ದೃಢೀಕರಣಕ್ಕಾಗಿ ಅವರ ಹೆಸರು, ವಿಳಾಸ, ಖಾತೆ ನಂಬರ್ ಖಚಿತಪಡಿಸಿಕೊಳ್ಳಲು ಮತ್ತೆ ಅರ್ಜಿ ಸಲ್ಲಿಸಲು ಹೇಳಲಾಗಿದೆ ಹೊರತು ಯಾವುದೇ ಕಾರಣಕ್ಕೂ ಯೋಜನೆ ನಿಲ್ಲಿಸುವುದಿಲ್ಲ ಎಂದು ಹೇಳಿಕೆಯಲ್ಲಿ ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

ಎಲ್ಲ ಖಾತ್ರಿ ಯೋಜನೆಗಳು ಶೇಕಡಾ ನೂರಕ್ಕೆ ನೂರರಷ್ಟು ಮುಂದುವರೆಯುತ್ತವೆ. ಯಾರು ಆತಂಕಪಡುವ ಅವಶ್ಯಕತೆ ಇಲ್ಲ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

---

ಕೇಂದ್ರ ಸರ್ಕಾರ ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳ ರಸ್ತೆಗಳ ಸುಧಾರಣೆಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಒಟ್ಟು ೫೭ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆಗೆ ಅನುದಾನ ಮಂಜೂರು ಆಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ.

ಈ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಒಟ್ಟು ೧೪ ಪ್ರಮುಖ ಕಾಮಗಾರಿ ಮೂಲಕ ವಿವಿಧೆಡೆ ಒಟ್ಟು ೮೨.೯೪ ಕಿಲೋಮೀಟರ್ ಉದ್ದದ ರಸ್ತೆ ಅಭಿವೃದ್ಧಿಪಡಿಸಲಾಗುವುದು. ಜಿಲ್ಲೆಯ ಪ್ರಮುಖ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ರಸ್ತೆಗಳನ್ನು ಈ ಅನುದಾನದ ಮೂಲಕ ಮೇಲ್ದರ್ಜೆಗೇರಿಸಲಾಗುವುದು ಎಂದು ತಿಳಿಸಿದರು.

ಮಂಗಳೂರು, ಉಳ್ಳಾಲ, ಮೂಡುಬಿದಿರೆ, ಪುತ್ತೂರು ಬಂಟ್ವಾಳ ಸೇರಿದಂತೆ ಎಲ್ಲಾ ತಾಲೂಕುಗಳಲ್ಲಿಯೂ ನಿಗದಿತ ರಸ್ತೆಗಳ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಂಸದರು ಮಾಹಿತಿ ನೀಡಿದ್ದಾರೆ.

---

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಜೆಡಿಎಸ್ ಪಕ್ಷ ರೈತರ ಪರವಾಗಿದ್ದು, ಅವರ ಜೊತೆ ನಿಂತು ಕಾನೂನು ಹೋರಾಟ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಯಾವುದೇ ಯೋಜನೆ ಕೈಗೊಳ್ಳುವ ಮುನ್ನಾ ರೈತರ ಒಪ್ಪಿಗೆ ಪಡೆಯಬೇಕು. ಅದನ್ನು ಮಾಡದೇ ಸರ್ಕಾರ ರೈತರನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ಅಭಿವೃದ್ಧಿಗೆ ಯಾವುದೇ ಉಪಯೋಗವಾಗದ ಈ ಯೋಜನೆಯನ್ನು ಮುಖ್ಯಮಂತ್ರಿ ತಮ್ಮ ಸ್ವಾರ್ಥಕ್ಕಾಗಿ ಬಳಸಿಕೊಳ್ಳಲು ಯತ್ನಿಸಿದ್ದಾರೆ ಎಂದು ಆರೋಪಿಸಿದ ಕುಮಾರಸ್ವಾಮಿ, ಜೆಡಿಎಸ್ ರೈತರ ಪರವಾಗಿದ್ದು, ಅವರ ಜೊತೆ ನಿಂತು ಕಾನೂನು ಹೋರಾಟ ನಡೆಸಲಿದೆ ಎಂದು ತಿಳಿಸಿದರು.

___________e__________

ಇದೇ ೨೧ರಂದು ಹಮ್ಮಿಕೊಳ್ಳಲಾಗಿರುವ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜಿಲ್ಲೆಯಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಯೋಗ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸ್ಥಳೀಯ ಪೊಲೀಸ್ ಕ್ರೀಡಾಂಗಣದಲ್ಲಿ ಖ್ಯಾತ ಯೋಗಪಟು ಮುರಳಿ ಯೋಗಾಸನಗಳ ಮಾರ್ಗದರ್ಶನ ನೀಡಲಿದ್ದಾರೆ. ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಿಳಿಸಿದ್ದಾರೆ.

______________________

ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ೨೦೨೪-೨೫ ನೇ ಸಾಲಿನಲ್ಲಿ ೨೮ ಸಾವಿರದ ೫೫ ಮನೆಗಳನ್ನು ಮಂಜೂರು ಮಾಡಲಾಗಿದೆ.

'ಸರ್ವರಿಗೂ ಸೂರು' ಎನ್ನುವ ಧ್ಯೇಯ-ಉದ್ದೇಶದೊಂದಿಗೆ ಆರಂಭವಾದ ಯೋಜನೆ ವಿಜಯಪುರ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಂಡಿದ್ದು, ಇದರ ಬಗ್ಗೆ ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾಧಿಕಾರಿ ಚಂದ್ರಕಾಂತ ಕುಂಬಾರ ತಿಳಿಸಿದ್ದಾರೆ.

______________________

ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ನಾಳೆ ದೇಶಾದ್ಯಂತ "ಯಾತ್ರಾ ಸುವಿಧ ದಿವಸ್" ಆಚರಿಸುತ್ತಿದ್ದು, ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಜಾನಪದ ನೃತ್ಯ, ಗಾಯನ,

ರಕ್ತದಾನ ಶಿಬಿರ, ಉಚಿತ ವೈದ್ಯಕೀಯ ಚಿಕಿತ್ಸೆ, ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಬೆಳಗಾವಿ ವಿಮಾನ ನಿಲ್ದಾಣ ನಿರ್ದೇಶನ ಎಸ್.ತ್ಯಾಗರಾಜ ತಿಳಿಸಿದ್ದಾರೆ.

ಕಳೆದ ೧೨ ವರ್ಷಗಳಲ್ಲಿ ಉತ್ತರ ಕರ್ನಾಟಕದ ಆರ್ಥಿಕ ಹಾಗೂ ವಾಯುಯಾನ ತರಬೇತಿಗೆ ಪ್ರಮುಖ ಕೇಂದ್ರವಾಗಿ ಬೆಳೆದು ಬಂದಿರುವ ಬೆಳಗಾವಿ ವಿಮಾನ ನಿಲ್ದಾಣ ಅನೇಕ ಭವಿಷ್ಯದ ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ಎಂದು ತ್ಯಾಗರಾಜ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ತ್ಯಾಗರಾಜ

---

ಭಾಷೆಯ ಬೆಳವಣಿಗೆಗೆ ಸಾಹಿತ್ಯ ಅನುವಾದ ಬಹು ಮುಖ್ಯವಾಗಿದೆ ಎಂದು ಹಿರಿಯ ವಿದ್ವಾಂಸ ಡಾ.ಎ. ವಿ.ನಾವಡ ಹೇಳಿದರು.

ಮಂಗಳೂರಿನಲ್ಲಿ ಆಯೋಜಿಸಿದ ತುಳು ಭಾಷೆಗೆ ಅನುವಾದಿಸಲಾದ ಕನಕದಾಸರ ಸಮಗ್ರ ಸಾಹಿತ್ಯ ಕೃತಿಗಳ ಸಂವಾದ ಹಾಗೂ ಕಾವ್ಯ ವಾಚನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಂದು ಭಾಷೆಗಳು ಕೂಡ ತನ್ನದೇ ಆದ ಮಹತ್ವ ಪಡೆದಿದ್ದು, ಅನುವಾದದ ಕೆಲಸ ಮುಂದುವರಿಯಬೇಕಿದೆ ಎಂದರು.

ವಿದ್ವಾಂಸ ಪ್ರೊ. ಶಿವರಾಮ ಶೆಟ್ಟಿ ಮಾತನಾಡಿ, ಕನಕದಾಸರ ಅಧ್ಯಯನವು ಕೇವಲ ಸಾಹಿತ್ಯಿಕ ದೃಷ್ಟಿಯಿಂದ ಮಾತ್ರವಲ್ಲ, ಸಾಮಾಜಿಕ ಮತ್ತು ಸಾಂಸ್ಕೃತಿಕ ನೆಲೆಗಟ್ಟಿನಲ್ಲಿಯೂ ನಡೆಯಬೇಕು ಎಂದರು.

---

ಸಂವಿಧಾನ ಶಿಲ್ಪಿ, ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ, ಹೋರಾಟ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಕೋಲಾರ ಜಿಲ್ಲೆಯಲ್ಲಿ ಭವ್ಯವಾದ ವಸ್ತು ಸಂಗ್ರಹಾಲಯ ನಿರ್ಮಾಣ ಮಾಡಲು ರಾಜ್ಯ ಸರ್ಕಾರ ಅಧಿಕೃತವಾಗಿ ಪೂರ್ವಾನುಮೋದನೆ ನೀಡಿದೆ.

---

ಇನ್ನು ಹವಾವರ್ತಮಾನ,

ರಾಜ್ಯದ ದಕ್ಷಿಣ ಒಳನಾಡು ಮತ್ತು ಕರಾವಳಿ ಭಾಗದಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು.

ಕರಾವಳಿಯ ಹಲವೆಡೆ ಮತ್ತು ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ. ಬ್ರಹ್ಮಾವರದಲ್ಲಿ ೮, ಉಡುಪಿಯಲ್ಲಿ ೭, ಕುಂದಾಪುರದಲ್ಲಿ ೬ ಸೆಂಟಿ ಮೀಟರ್ ಮಳೆಯಾಗಿದೆ.

ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ಉತ್ತರ ಒಳನಾಡಿನ ಒಂದೆರಡು ಕಡೆ, ದಕ್ಷಿಣ ಒಳನಾಡು ಮತ್ತು ಕರಾವಳಿಯಾದ್ಯಂತ ಹೆಚ್ಚಿನ ಸ್ಥಳಗಳಲ್ಲಿ ಮಳೆ ಸಾಧ್ಯತೆ. ಕಲಬುರಗಿಯಲ್ಲಿ ೩೮ ಸೆಲ್ಸಿಯಸ್ ಗರಿಷ್ಠ ತಾಪಮಾನ ದಾಖಲಾಗಿತ್ತು.

ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಒಂದೆರೆಡು ಸ್ಥಳಗಳಲ್ಲಿ ಗುಡುಗು ಸಹಿತ ಭಾರೀ ಮಳೆ ಸಾಧ್ಯತೆ. ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

---

ಭಾರತೀಯ ಕೃಷಿ ಅನುಸಂಧಾನ ಪರಿಷತ್- CMFRI ಕಾರವಾರ ಪ್ರಾದೇಶಿಕ ಕೇಂದ್ರದಲ್ಲಿ ತಾತ್ಕಾಲಿಕ ಯಂಗ್ ಪ್ರೊಫೆಷನಲ್-| ಹುದ್ದೆಗೆ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಜಾಲತಾಣ www.cmfri.org.in ಭೇಟಿ ನೀಡಿ ಪರಿಶೀಲಿಸಬಹುದಾಗಿದೆ ಎಂದು ಕಾರವಾರ ಪ್ರಾದೇಶಿಕ ಕೇಂದ್ರದ ಪ್ರಭಾರ ವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

__________ ಮುಕ್ತಾಯ __________